**ಕರ್ನಾಟಕ ಸರ್ಕಾರ**
**ಆಯುಷ್ ಇಲಾಖೆ**
ಧನ್ವಂತರಿ ರಸ್ತೆ,ಆನಂದರಾವ್ ವೃತ್ತದ ಹತ್ತಿರ,ಬೆಂಗಳೂರು-560009
ದೂರವಾಣಿ ಸಂ:080-22876553,ಫ್ಯಾಕ್ಸ್:080-22340139
ಇ-ಮೇಲ್-directorayush@gmail.com

ಸಂಖ್ಯೆ:ಆಯುಷ್:01:ಸಿಬ್ಬಂದಿ(5):2020-21 ದಿನಾಂಕ:13.07.2021.

**ಸುತ್ತೋಲೆ**

ವಿಷಯ:- 2021-22 ನೇ ಸಾಲಿನ ವರ್ಗಾವಣೆ ಬಗ್ಗೆ.

ಉಲ್ಲೇಖ:- ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ:03:ಸೇನೌವ:2021 ದಿ:08.07.2021.

*****

ಉಲ್ಲೇಖಿತ ಸರ್ಕಾರದ ಆದೇಶ ದಿನಾಂಕ:08.07.2021 ರಲ್ಲಿ ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ:22:ಸೇನೌವ:2013 ದಿನಾಂಕ:07.06.2013 ರಲ್ಲಿ ನಮೂದಿಸಿರುವ ಷರತ್ತುಗಳೊಂದಿಗೆ 2021-22 ನೇ ಸಾಲಿಗೆ ಗ್ರೂಪ್-ಬಿ ಮತ್ತು ಸಿ ವರ್ಗದ ಅಧಿಕಾರಿ/ನೌಕರರಿಗೆ ಮಾತ್ರ ಅನ್ವಯಿಸುವಂತೆ ಮಿತಿಗೊಳಿಸಿ ಒಂದು ಜೇಷ್ಠತಾ ಘಟಕದಲ್ಲಿ ಕಾರ್ಯನಿರತ ವೃಂದ ಬಲದ ಶೇಕಡಾ 6 ನ್ನು ಮೀರದಂತೆ ದಿನಾಂಕ:**22.07.2021** ರವರೆಗೆ ಸಾರ್ವತ್ರಿಕ ವರ್ಗಾವಣೆ ಕೈಗೊಳ್ಳಲು ಆಯಾ ಇಲಾಖಾ ಸಚಿವರಿಗೆ ಅಧಿಕಾರ ಪ್ರತ್ಯಯೋಜಿಸಲಾಗಿದೆ.(ಪ್ರತಿ ಲಗತ್ತಿಸಿದೆ)

ಈ ಹಿನ್ನಲೆಯಲ್ಲಿ ಸದರಿ ಮಾಹಿತಿಯನ್ನು ಕೂಡಲೇ ತಮ್ಮ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗ್ರೂಪ್-ಬಿ ಮತ್ತು ಸಿ ವೃಂದದ ಅಧಿಕಾರಿ ಮತ್ತು ಸಿಬ್ಬಂದಿಗಳ ಗಮನಕ್ಕೆ ತಂದು, ಅವರುಗಳು ನೀಡುವ ವರ್ಗಾವಣೆ ಮನವಿಗಳನ್ನು ಮತ್ತು ಈಗಾಗಲೇ ಸಲ್ಲಿಸಿರುವಂತಹ ಮನವಿಗಳನ್ನೂ ಸಹ 02 ದಿನದೊಳಗಾಗಿ ಕೆಳಕಂಡ ಇ-ಮೇಲ್ ವಿಳಾಸಗಳಿಗೆ ಕಳುಹಿಸಲು ಹಾಗೂ Hard copy ಗಳನ್ನು ನಿರ್ದೇಶನಾಲಯಕ್ಕೆ ಕಳುಹಿಸುವಂತೆ ತಿಳಿಸಿದೆ.

**ಇ-ಮೇಲ್- directorayush@gmail.com**
**directorayush.est@gmail.com**

13/7/21
ಆಯುಕ್ತರು
ಆಯುರ್ವೇದ, ಯೋಗ ಮತ್ತು ನ್ಯಾಚುರೋಪತಿ
ಯುನಾನಿ, ಸಿದ್ಧ ಮತ್ತು ಹೋಮಿಯೋಪತಿ
(ಆಯುಷ್) ಇಲಾಖೆ, ಧನ್ವಂತರಿ ರಸ್ತೆ,
ಬೆಂಗಳೂರು – 560 009

ಗೆ,

1. ಇಲಾಖೆಯ ಎಲ್ಲಾ ಅಧೀನ ಸಂಸ್ಥೆಯ ಮುಖ್ಯಸ್ಥರುಗಳು
2. ಆಯುಕ್ತರು/ಮುಖ್ಯ ಆಡಳಿತಾಧಿಕಾರಿಗಳ ಆಪ್ತ ವಿಭಾಗ,ಆಯುಷ್ ನಿರ್ದೇಶನಾಲಯ, ಬೆಂಗಳೂರು.
3. ಹೆಚ್ಚುವರಿ/ಕಛೇರಿ ಪ್ರತಿ.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ: 2021-22ನೇ ಸಾಲಿನಲ್ಲಿ ಮಾಡುವ ಸರ್ಕಾರಿ ನೌಕರರ ವರ್ಗಾವಣೆ ಮಾರ್ಗಸೂಚಿಗಳ ಕುರಿತು.**

ಓದಲಾಗಿದೆ:-

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013, ದಿನಾಂಕ:07.06.2013

ಪ್ರಸ್ತಾವನೆ:-

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ಸರ್ಕಾರಿ ನೌಕರರ ವರ್ಗಾವಣೆ ಕುರಿತಂತೆ ವಿಸ್ತೃತವಾದ ಮಾರ್ಗಸೂಚಿಗಳನ್ನು ನೀಡಲಾಗಿದೆ. ಈ ಮಾರ್ಗಸೂಚಿಗಳ ಪ್ರಕಾರ ಸರ್ಕಾರಿ ನೌಕರರ ವರ್ಗಾವಣೆಗಳನ್ನು ಪ್ರತಿ ವರ್ಷ ಮೇ ಮತ್ತು ಜೂನ್ ತಿಂಗಳುಗಳಲ್ಲಿ ಮಾತ್ರ ಸದರಿ ಮಾರ್ಗಸೂಚಿಗಳಲ್ಲಿರುವ ಷರತ್ತುಗಳಿಗೊಳಪಟ್ಟು ಮಾಡಬಹುದಾಗಿದೆ.

ಕೋವಿಡ್-19 ಸಂಕಷ್ಟದ ಪರಿಸ್ಥಿತಿ ಈ ಸಾಲಿನಲ್ಲಿಯೂ ಮುಂದುವರೆದಿರುವುದರಿಂದ, 2021-22ನೇ ಸಾಲಿಗೆ ಗ್ರೂಪ್-ಬಿ ಮತ್ತು ಗ್ರೂಪ್-ಸಿ ವರ್ಗದ ಅಧಿಕಾರಿ/ನೌಕರರಿಗೆ ಮಾತ್ರ ಅನ್ವಯವಾಗುವಂತೆ ಮಿತಿಗೊಳಿಸಿ ಒಂದು ಜೇಷ್ಠತಾ ಘಟಕದಲ್ಲಿ ಕಾರ್ಯನಿರತ ವೃಂದ ಬಲದ ಶೇಕಡಾ 6 ನ್ನು ಮೀರದಂತೆ ಸಾರ್ವತ್ರಿಕ ವರ್ಗಾವಣೆ ಕೈಗೊಳ್ಳಲು ಆಯಾ ಇಲಾಖಾ ಸಚಿವರಿಗೆ ಅಧಿಕಾರ ಪ್ರತ್ಯಾಯೋಜಿಸಲು ನಿರ್ಧರಿಸಿರುವುದರಿಂದ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 3 ಸೇನೌವ 2021, ಬೆಂಗಳೂರು, ದಿನಾಂಕ: 08.07.2021**

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 22 ಸೇನೌವ 2013 ದಿನಾಂಕ: 07.06.2013ರಲ್ಲಿ ನಮೂದಿಸಿರುವ ಷರತ್ತುಗಳೊಂದಿಗೆ, 2021-22 ನೇ ಸಾಲಿಗೆ ಗ್ರೂಪ್-ಬಿ ಮತ್ತು ಗ್ರೂಪ್-ಸಿ ವರ್ಗದ ಅಧಿಕಾರಿ/ನೌಕರರಿಗೆ ಮಾತ್ರ ಅನ್ವಯವಾಗುವಂತೆ ಮಿತಿಗೊಳಿಸಿ ಒಂದು ಜೇಷ್ಠತಾ ಘಟಕದಲ್ಲಿ ಕಾರ್ಯನಿರತ ವೃಂದ ಬಲದ ಶೇಕಡಾ 6ನ್ನು ಮೀರದಂತೆ **ದಿನಾಂಕ: 22.07.2021** ರವರೆಗೆ ಸಾರ್ವತ್ರಿಕ ವರ್ಗಾವಣೆ ಕೈಗೊಳ್ಳಲು ಆಯಾ ಇಲಾಖಾ ಸಚಿವರಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದೆ.

9/7/21

AAO)

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Thejavathi 8/7/2021
(ತೇಜಾವತಿ. ಎನ್.)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು - ವಿಶೇಷ ಕೋಶ)

**ಇವರಿಗೆ:** ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 100 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸೇವಾ ನಿಯಮಗಳು-ಬಿ, ಕೊಠಡಿ ಸಂಖ್ಯೆ: 31, ವಿಧಾನಸೌಧ, ನೆಲಮಹಡಿ ಇಲ್ಲಿಗೆ ಕಳುಹಿಸುವಂತೆ ಕೋರಿದೆ.